## 30. ಉತ್ತರ ಕರ್ನಾಟಕ ಭಾಗದಲ್ಲಿ ಭಾರಿ ಮಳೆ

ಉತ್ತರ ಕರ್ನಾಟಕ ಭಾಗದಲ್ಲಿ ರಾತ್ರಿಯಿಂದ ಭಾರಿ ಮಳೆ ಆಗಿದೆ. ಹಳ್ಳಕೊಳ್ಳಗಳು ಉಕ್ಕಿ ಹರಿಯುತ್ತಿವೆ. ಗ್ರಾಮೀಣ ಪ್ರದೇಶದಲ್ಲಿ ಜನಜೀವನ ಅಸ್ತವ್ಯಸ್ತಗೊಂಡಿದೆ.

ಕಲಬುರ್ಗಿ, ಯಾದಗಿರಿ, ರಾಯಚೂರು ಜಿಲ್ಲೆಗಳಲ್ಲಿ ಭಾರಿ ಮಳೆಯಾಗಿದ್ದು, ನದಿ–ಹಳ್ಳಗಳು ಉಕ್ಕಿ ಹರಿಯುತ್ತಿವೆ. ಹಲವು ಹಳ್ಳಿಗಳ ಸಂಪರ್ಕ ಕಡಿತಗೊಂಡಿದೆ. ಎರಡು ಸಾವಿರಕ್ಕೂ ಹೆಚ್ಚು ಮನೆಗಳಿಗೆ ಹಾನಿಯಾಗಿದ್ದು, ಅಪಾರ ಪ್ರಮಾಣದ ಬೆಳೆ ನಷ್ಟವಾಗಿದೆ.

ಕಲಬುರ್ಗಿ ನಗರದ ಮುಖ್ಯರಸ್ತೆಯ 60ಕ್ಕೂ ಹೆಚ್ಚು ವಾಣಿಜ್ಯ ಮಳಿಗೆಗಳಿಗೆ ನೀರು ನುಗ್ಗಿ ಹಾನಿ ಸಂಭವಿಸಿದೆ. ಕಾಗಿಣಾ ನದಿ ಪ್ರವಾಹದಿಂದಾಗಿ ಮಳಖೇಡ ಬಳಿಯ ಸೇತುವೆ ಮುಳುಗಿದೆ. ಕಲಬುರ್ಗಿ–ಉದನೂರು, ಮುಧೋಳ–ಕೊತ್ತಪಲ್ಲಿ ರಸ್ತೆಗಳ ಮೇಲೆ ನೀರು ನುಗ್ಗಿ ಸಂಚಾರ ಸಂಪೂರ್ಣ ಬಂದ್ ಆಗಿದೆ. ಜೇವರ್ಗಿ ಪಟ್ಟಣದ ಮುಖ್ಯರಸ್ತೆ ಕೊಚ್ಚಿಕೊಂಡು ಹೋಗಿದೆ.

ಕಾಳಗಿಯ ಐತಿಹಾಸಿಕ ನೀಲಕಂಠ ಕಾಳೇಶ್ವರ ದೇವಸ್ಥಾನ, ಚಿಂಚೋಳಿ ತಾಲ್ಲೂಕಿನ ರುದ್ನೂರು ಗ್ರಾಮದ ಐತಿಹಾಸಿಕ ತೋಂಡದ ಸಿದ್ಧೇಶ್ವರ ಮಠ, ಮಳಖೇಡ ಸಮೀಪದ ಉತ್ತರಾದಿಮಠ ಜಲಾವೃತವಾಗಿವೆ.

‘ಜಿಲ್ಲೆಯಲ್ಲಿ ಮುಂಗಾರು ಆರಂಭದಿಂದ ಇಲ್ಲಿಯವರೆಗೆ ಶೇ.46ರಷ್ಟು ಹೆಚ್ಚುವರಿ ಮಳೆ ಬಿದ್ದಿದ್ದು, ದಶಕದಲ್ಲೇ ಇದು ದಾಖಲೆ’ ಎಂದು ಕೃಷಿ ವಿಜ್ಞಾನ ಕೇಂದ್ರದ ವಿಜ್ಞಾನಿಗಳು ಮಾಹಿತಿ ನೀಡಿದ್ದಾರೆ.

ಧಾರವಾಡ, ವಿಜಯಪುರ, ಬಳ್ಳಾರಿ, ಬೆಳಗಾವಿ, ಬಾಗಲಕೋಟೆ, ಕಾರವಾರ, ಶಿರಸಿ, ಹಾವೇರಿ ಹಾಗೂ ಗದಗ ಜಿಲ್ಲೆಯಲ್ಲಿ ಮಳೆಯಾಗಿದೆ.

ಬಾಗಲಕೋಟೆ ಜಿಲ್ಲೆಯ ಹುನಗುಂದ ತಾಲ್ಲೂಕಿನ ಕೂಡಲಸಂಗಮದಲ್ಲಿ ಅತಿ ಹೆಚ್ಚು, 10.03 ಸೆ.ಮೀ ಮಳೆ ದಾಖಲಾಗಿದೆ. 15 ಮನೆಗಳು ಕುಸಿದಿವೆ. ರಬಕವಿ ಬನಹಟ್ಟಿಯಲ್ಲಿ ಸಂಜೆ ಮತ್ತು ಬೆಳಗ್ಗೆ ಸುರಿದ ಭಾರಿ ಮಳೆಗೆ ಸ್ಥಳೀಯ ಪೊಲೀಸ್ ಠಾಣೆಯ ಹಿಂಭಾಗದಲ್ಲಿರುವ ಅಂಜುಮನ್ ಎ ಇಸ್ಲಾಂ ಸರ್ಕಾರಿ ಕನ್ನಡ ಗಂಡು ಮಕ್ಕಳ ಉರ್ದು ಶಾಲೆಯ ಕಟ್ಟಡ ಕುಸಿದುಬಿದ್ದಿದೆ. ಕೊಡಗು, ಶಿವಮೊಗ್ಗ, ದಾವಣಗೆರೆ, ದಕ್ಷಿಣ ಕನ್ನಡ, ಉಡುಪಿ, ಚಿಕ್ಕಮಗಳೂರು ಜಿಲ್ಲೆಗಳಲ್ಲಿ ಸಾಧಾರಣ ಮಳೆ ಆಗಿದೆ.

ಆಧಾರ:ಪ್ರಜಾವಾಣಿ, ದಿನಾಂಕ:27.09.2020